**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ**
**ಅಧಿಸೂಚನೆ**
**ಸಂಖ್ಯೆ: ಸಿಆಸುಇ 1 ಎಆರ್ ಬಿ 2019, ಬೆಂಗಳೂರು,**
**ದಿನಾಂಕ:11.12.2019**

ಭಾರತ ಸಂವಿಧಾನದ 166ನೇ ಅನುಚ್ಛೇದದ ಕಲಂ (2) ಮತ್ತು (3) ರಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ರಾಜ್ಯಪಾಲರು, ಕರ್ನಾಟಕ ಸರ್ಕಾರ (ಕೆಲಸಗಳ ಹಂಚಿಕೆ) ನಿಯಮಗಳು, 1977, ಇದಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಕೆಳಕಂಡ ನಿಯಮಗಳನ್ನು ಈ ಮೂಲಕ ರಚಿಸಿದ್ದಾರೆ, ಎಂದರೆ,-

**1. ಶೀರ್ಷಿಕೆ ಮತ್ತು ಪ್ರಾರಂಭ:- 1)** ಈ ನಿಯಮಗಳನ್ನು ಕರ್ನಾಟಕ ಸರ್ಕಾರ (ಕೆಲಸಗಳ ಹಂಚಿಕೆ) (ತಿದ್ದುಪಡಿ) ನಿಯಮಗಳು, 2019 ಎಂದು ಕರೆಯತಕ್ಕದ್ದು.

2) ಇವುಗಳು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ಅನುಸೂಚಿ XI ಕ್ಕೆ ತಿದ್ದುಪಡಿ:-** ಕರ್ನಾಟಕ ಸರ್ಕಾರ (ಕೆಲಸಗಳ ಹಂಚಿಕೆ) ನಿಯಮಗಳು, 1977ರ ಅನುಸೂಚಿ XI ರಲ್ಲಿ,

**(ಎ) "ಸಂಸದೀಯ ವ್ಯವಹಾರಗಳ ಇಲಾಖೆ"** ಎಂಬ ಶೀರ್ಷಿಕೆಗೆ **"ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ "** ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**(ಬಿ) "ಡಿ.ನೌಕರಿ ಭರ್ತಿ ನಿಯಮಗಳು ಮತ್ತು ನೇಮಕಗಳು"** ಉಪ ಶೀರ್ಷಿಕೆಯಡಿಯಲ್ಲಿ **"ಸಂಸದೀಯ ವ್ಯವಹಾರಗಳ ಇಲಾಖೆ"** ಎಂಬ ಪದಗಳು ಬರುವಲ್ಲೆಲ್ಲ **"ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ"** ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಸಹಿ/-
(ವಾಜುಬಾಯಿವಾಲಾ)
ಕರ್ನಾಟಕ ರಾಜ್ಯಪಾಲರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಚಂದ್ರಹಾಸ.ಗಂ.ತಾಳೂಕರ**
ಸರ್ಕಾರದ ಉಪ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)